ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 21/4/2021

# ಪರೀಕ್ಷೆಯಿಲ್ಲದೇ ಎಲ್ರೂ ಪಾಸ್... ಶಾಲೆಗೆ ರಜೆ

ಉವ 21/4/21

## 1-9ನೇ ತರಗತಿ ವಿದ್ಯಾರ್ಥಿಗಳೆಲ್ಲರೂ ತೇರ್ಗಡೆ

**ಬೆಂಗಳೂರು:** ಕೊರೊನಾ ಹೆಚ್ಚಳವಾಗುತ್ತಿರುವ ಬೆನ್ನಲ್ಲೇ ಒಂದರಿಂದ ಒಂಭತ್ತನೇ ತರಗತಿವರೆಗೆ ಎಲ್ಲಾ ವಿದ್ಯಾರ್ಥಿಗಳನ್ನು ಪಾಸ್ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಆದರೆ, ನಿಗದಿಯಂತೆಯೇ 10ನೇ ತರಗತಿ ಪರೀಕ್ಷೆ ಜೂ.14ರಿಂದ ಆರಂಭವಾಗಲಿವೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಹೇಳಿದೆ.

ಕೊರೊನಾ ಹೆಚ್ಚಳವಾದ ಹಿನ್ನೆಲೆಯಲ್ಲಿ ಪರೀಕ್ಷೆ ರದ್ದು ಮಾಡಬೇಕು ಎಂಬ ಆಗ್ರಹ ಕೇಳಿಬಂದಿತ್ತು. ಈಗ ಸಾರ್ವಜನಿಕ ಶಿಕ್ಷಣ ಇಲಾಖೆ ಕಠಿಣ ಕ್ರಮ ತೆಗೆದುಕೊಂಡಿದೆ.

ಇದರ ಜತೆಗೆ ಮೇ 1ರಿಂದ ಜೂ.14ರವರೆಗೆ ಒಂದರಿಂದ ಏಳು/ಎಂಟನೇ ತರಗತಿ ಇರುವ ಪ್ರಾಥಮಿಕ ಶಾಲೆಗಳಿಗೆ ಬೇಸಿಗೆ ರಜೆ ನೀಡಲಾಗಿದೆ. ಹೀಗಾಗಿ ಈ ಶಾಲೆಗಳಿಗೆ ಜೂ.15ರಿಂದ 2021-22ನೇ ಸಾಲಿನ ಶೈಕ್ಷಣಿಕ ವರ್ಷ ಆರಂಭವಾಗಲಿದೆ. ಅದರಂತೆ 8 ಮತ್ತು 9ನೇ ತರಗತಿಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಮೇ 1ರಿಂದ ಜುಲೈ 14ರವರೆಗೆ ಬೇಸಿಗೆ ರಜೆ ಘೋಷಿಸಲಾಗಿದ್ದು ಜುಲೈ 15ರಿಂದ ಹೊಸ ಶೈಕ್ಷಣಿಕ ವರ್ಷ ಆರಂಭವಾಗಲಿದೆ.

ಯಾವುದೇ ಕಾರಣಕ್ಕೂ ಆನ್‌ಲೈನ್ ಆಗಲಿ, ಆಫ್‌ಲೈನ್ ಆಗಲಿ ಪರೀಕ್ಷೆ ಮಾಡಕೂಡದು ಎಂದು ಆದೇಶ ನೀಡಲಾಗಿದೆ. ಈ ಎಲ್ಲ ಪ್ರಕ್ರಿಯೆ ಏ.30ರೊಳಗೆ ಮುಗಿಯಬೇಕು ಎಂದೂ ಸೂಚನೆ ನೀಡಲಾಗಿದೆ.

**ಪ್ರೌಢಶಾಲಾ ಶಿಕ್ಷಕರಿಗೆ ರಜೆ:** ಪ್ರೌಢಶಾಲೆಗಳ ಶಿಕ್ಷಕರಿಗೆ ಜೂ.15ರಿಂದ ಜು.14ರವರೆಗೆ ಬೇಸಿಗೆ ರಜೆ ಇರಲಿದೆ. ಜೂ.21ರಿಂದ ಜು.5ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ನಡೆಯುತ್ತವೆ. ಜು.15ರಿಂದ 2021-22ನೇ ಸಾಲಿನ ಶೈಕ್ಷಣಿಕ ವರ್ಷ ಆರಂಭವಾಗಲಿದೆ.



ಸಾಂದರ್ಭಿಕ ಚಿತ್ರ

## ಐಸಿಎಸ್‌ಇ 10ನೇ ತರಗತಿ ಪರೀಕ್ಷೆ ರದ್ದು

ಅತ್ತ ಐಸಿಎಸ್‌ಇ 10ನೇ ತರಗತಿ ಪರೀಕ್ಷೆಗಳನ್ನು ರದ್ದು ಮಾಡಿ ಆದೇಶ ಹೊರಡಿಸಿದೆ. ಆದರೆ, ಯಥಾಪ್ರಕಾರ 12ನೇ ತರಗತಿ ಪರೀಕ್ಷೆ ನಡೆಯಲಿದೆ. ಮುಂದಿನ ದಿನಗಳಲ್ಲಿ ಪರೀಕ್ಷಾ ದಿನಾಂಕ ಪ್ರಕಟಿಸಲಾಗುವುದು ಎಂದು ಐಸಿಎಸ್‌ಇ ಮಂಡಳಿ ಕಾರ್ಯದರ್ಶಿ ಗೆರ‍್ರಿ ಅರಥೂನ್ ಹೇಳಿದ್ದಾರೆ. ಕಳೆದ ವಾರವಷ್ಟೇ, ಮಂಡಳಿಯು 10 ಮತ್ತು 12ನೇ ತರಗತಿ ಪರೀಕ್ಷೆಗಳನ್ನು ಮುಂದೂಡಿಕೆ ಮಾಡಿತ್ತು. ಈಗ 10ನೇ ತರಗತಿ ಸಂಬಂಧ ನೀಡಲಾಗಿದ್ದ ಆದೇಶ ವಾಪಸ್ ಪಡೆದಿದೆ.

## ಯುಜಿಸಿ-ನೆಟ್ ಮುಂದಕ್ಕೆ

ಯುಜಿಸಿ-ನೆಟ್ (ರಾಷ್ಟ್ರೀಯ ಉಪನ್ಯಾಸಕರ ಅರ್ಹತಾ ಪರೀಕ್ಷೆ) ಪರೀಕ್ಷೆಯನ್ನೂ ಮುಂದೂಡಲಾಗಿದೆ. ರಾಷ್ಟ್ರೀಯ ಪರೀಕ್ಷಾ ಪ್ರಾಧಿಕಾರ(ಎನ್‌ಟಿಎ) ಈ ನಿರ್ಧಾರ ತೆಗೆದುಕೊಂಡಿದೆ. ಈ ಹಿಂದೆ ನಿರ್ಧಾರವಾದಂತೆ ಮೇ 2ರಿಂದ 17ರವರೆಗೆ ನೆಟ್ ಪರೀಕ್ಷೆ ನಡೆಯಬೇಕಿತ್ತು. ಪರೀಕ್ಷೆಯ ಪರಿಷ್ಕೃತ ದಿನಾಂಕವನ್ನು ಕನಿಷ್ಠ 15 ದಿನಗಳ ಮುಂಚಿತವಾಗಿ ಘೋಷಿಸಲಾಗುವುದು ಎಂದೂ ಮಾಹಿತಿ ನೀಡಿದೆ.